ಪ್ರ-72 (133)

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ರವರು ನಿಯಮ-72ರ ಅಡಿಯಲ್ಲಿ ಮಂಡಿಸಿರುವ ಸೂಚನೆಗೆ ಉತ್ತರ**

---

**ಸೂಚನೆ :** " ರಾಜ್ಯದಲ್ಲಿ ಸಾರ್ವಜನಿಕರ ಸುರಕ್ಷತೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡಲು ಮತ್ತು ಸರ್ಕಾರದ ಸುರಕ್ಷತಾ ನೀತಿಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು, ಪೊಲೀಸರು ಮತ್ತು ಸಾರ್ವಜನಿಕರ ನಡುವೆ ಉತ್ತಮ ಬಾಂಧವ್ಯ ಬೆಳೆಸುವ ನಿಟ್ಟಿನಲ್ಲಿ ಪೊಲೀಸ್ ಠಾಣೆಗಳು ಜನಸಂಪರ್ಕ ಸಭೆಗಳನ್ನು ಪರಿಣಾಮಕಾರಿಯಾಗಿ ನಡೆಸುವ ವಿಚಾರದ ಕುರಿತು"

**ಉತ್ತರ** :ರಾಜ್ಯದಲ್ಲಿ ಸಾರ್ವಜನಿಕರ ಸುರಕ್ಷತೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡಲು ಸರ್ಕಾರವು 'ಕರ್ನಾಟಕ ಸಾರ್ವಜನಿಕ ಸುರಕ್ಷೆಯ (ಕ್ರಮಗಳ) ಜಾರಿ ಅಧಿನಿಯಮ, 2017 ಮತ್ತು ಅದಕ್ಕೆ ಹೊಂದಿಕೊಂಡಂತೆ ಅಧಿನಿಯಮ 2018 ಅನ್ನು ಜಾರಿಗೆ ತಂದಿರುತ್ತದೆ. ಸದರಿ ಅಧಿನಿಯಮವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ರಾಜ್ಯದ ಎಲ್ಲಾ ಘಟಕಾಧಿಕಾರಿಗಳಿಗೆ ಸುತ್ತೋಲೆಯ ಮೂಲಕ ಸೂಚನೆಗಳನ್ನು ನೀಡಲಾಗಿರುತ್ತದೆ.

ಅದೇ ರೀತಿಯಾಗಿ ಪೊಲೀಸರು ಮತ್ತು ಸಾರ್ವಜನಿಕರ ನಡವೆ ಉತ್ತಮ ಬಾಂಧವ್ಯ ಬೆಳೆಸುವ ನಿಟ್ಟಿನಲ್ಲಿ ಕಮ್ಯೂನಿಟಿ ಪೊಲೀಸಿಂಗ್‌ಅನ್ನು ಜಾರಿಗೆ ತರಲಾಗಿರುತ್ತದೆ. ಈ ಕಮ್ಯೂನಿಟಿ ಪೊಲೀಸಿಂಗ್‌ನಲ್ಲಿ ಪೊಲೀಸ್ ಅಧಿಕಾರಿಗಳು ನಿರ್ವಹಿಸಬೇಕಾದ ಕಾರ್ಯಚಟುವಟಿಕೆಗಳ ಮತ್ತು ಜವಾಬ್ದಾರಿಗಳ ಕುರಿತು ಸ್ಥಾಯಿ ಆದೇಶ ಸಂಖ್ಯೆ-920 ರಲ್ಲಿ ನಿರ್ದೇಶನಗಳನ್ನು ನೀಡಲಾಗಿರುತ್ತದೆ.

ಮುಂದುವರೆದಂತೆ ಸರ್ಕಾರವು ಬೀಟ್ ವ್ಯವಸ್ಥೆಯನ್ನು ಪರಿಷ್ಕರಿಸಿ, ಪರಿಷ್ಕೃತ ಬೀಟ್ ವ್ಯವಸ್ಥೆಯನ್ನು ಜಾರಿಗೆ ತಂದಿರುತ್ತದೆ.

ಸದರಿ ಬೀಟ್ ವ್ಯವಸ್ಥೆಯಲ್ಲಿ ಬೀಟ್ ತಂಡದ ಪೊಲೀಸರು ತಮ್ಮ ಬೀಟ್ ವ್ಯಾಪ್ತಿಯ ನಾಗರೀಕ ಸದಸ್ಯರೊಂದಿಗೆ ಆಗಾಗ್ಗೆ ಸ್ಥಳೀಯ ಸಭೆಯನ್ನು ನಡೆಸಲಾಗುತ್ತದೆ. ಈ ರೀತಿಯಾಗಿ ಪೊಲೀಸ್ ಅಧಿಕಾರಿಗಳು ತಮ್ಮ ತಮ್ಮ ಪೊಲೀಸ್ ಠಾಣಾ ಸರಹದ್ದಿನಲ್ಲಿ ಜನಸಂಪರ್ಕ ಸಭೆಗಳನ್ನು ನಡೆಸಿ, ಸಾರ್ವಜನಿಕರೊಂದಿಗೆ ಉತ್ತಮ ಬಾಂಧವ್ಯವನ್ನು ಬೆಳೆಸಿಕೊಂಡು, ಅಪರಾಧಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಹಾಗೂ ಸಾರ್ವಜನಿಕರಲ್ಲಿ ಅಪರಾಧಗಳ ಬಗ್ಗೆ ಅರಿವನ್ನು ಮೂಡಿಸಿ, ಸುರಕ್ಷತೆಯನ್ನು ಕಾಪಾಡಲು ಕ್ರಮ ಕೈಗೊಳ್ಳಲಾಗಿದೆ.

---

**ಹೆಚ್‌ಡಿ 184 ಎಸ್‌ಎಸ್‌ಟಿ 2021**

(ಬಸವರಾಜ ಬೊಮ್ಮಾಯಿ)
ಗೃಹ ಮತ್ತು ಕಾನೂನು, ಸಂಸದೀಯ
ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು